ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 484
2.	ಸದಸ್ಯರ ಹೆಸರು	: ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರದಾವರು)
3.	ಉತ್ತರಿಸಬೇಕಾದ ದಿನಾಂಕ	: 16.09.2021.
4.	ಉತ್ತರಿಸುವ ಸಚಿವರು	: ಜಲಸಂಪನ್ಮೂಲ ಸಚಿವರು

ಕ್ರಸಂ.	ಪ್ರಶ್ನೆಗಳು	ಉತ್ತರಗಳು
ಅ)	ಎತ್ತಿನಹೊಳೆ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು; ಸದರಿ ಯೋಜನೆಗೆ ಸರ್ಕಾರ ನಿಗಧಿಪಡಿಸಿ ಬಿಡುಗಡೆ ಮಾಡಿದ ಅನುದಾನದ ಮೊತ್ತವೆಷ್ಟು;	ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ರೂ.12,912.36 ಕೋಟಿ ಮೊತ್ತದ ಪರಿಷ್ಕೃತ ವಿವರವಾದ ಯೋಜನಾ ವರದಿಗೆ ದಿನಾಂಕ:17.02.2014 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಸದರಿ ಯೋಜನೆಯ ಮೊದಲನೇ ಹಂತದ ಲಿಫ್ಟ್ ಕಾಮಗಾರಿಗಳನ್ನು ಮಾರ್ಚ್ 2014 ರಲ್ಲಿ ಪ್ರಾರಂಭಿಸಲಾಗಿರುತ್ತದೆ. ಸದರಿ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳಿಗಾಗಿ ಆಗಸ್ಟ್ 2021ರ ಅಂತ್ಯದವರಗೆ ಒಟ್ಟಾರೆ ರೂ.9,231.56 ಕೋಟಿಗಳ ಅನುದಾನ ಬಿಡುಗಡೆ ಮಾಡಲಾಗಿದೆ.
ಆ)	ಸದರಿ ಯೋಜನೆ ಪ್ರಾರಂಭವಾದಾಗಿನಿಂದ ಇದುವರೆವಿಗೂ ವೆಚ್ಚ ಮಾಡಿರುವ ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು) ಈ ಯೋಜನೆಯ ಕಾಮಗಾರಿಗಳು ಪ್ರಸ್ತುತ ಯಾವ ಹಂತದಲ್ಲಿವೆ; (ವಿವರಗಳನ್ನು ನೀಡುವುದು)	ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಗಳಿಗಾಗಿ ಆಗಸ್ಟ್ 2021ರ ಅಂತ್ಯದವರಗೆ ರೂ.9,231.56 ಕೋಟಿಗಳ ಸಂಚಿತ ವೆಚ್ಚ ಮಾಡಲಾಗಿದ್ದು, ವಾರ್ಷಿಕವಾರು ವಿವರಗಳು ಈ ಕೆಳಗಿನಂತಿವೆ. **ವರ್ಷಾವಾರು ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಗೆ ವೆಚ್ಚ ಮಾಡಿರುವ ವಿವರಗಳು:**

ಕ್ರಸಂ	ವರ್ಷ	ಮೊತ್ತ (ರೂ. ಕೋಟಿಗಳಲ್ಲಿ)
1	2012-13	0.38
2	2013-14	1.70
3	2014-15	1,140.35
4	2015-16	601.30
5	2016-17	441.28
6	2017-18	930.94
7	2018-19	1,550.95
8	2019-20	1,998.23
9	2020-21	1,945.79
10	2021-22 (ಆಗಸ್ಟ್ 2021 ರವರೆಗೆ)	620.65
ಒಟ್ಟು		9231.56

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು 02 ಹಂತಗಳಲ್ಲಿ ಕೈಗೆತ್ತಿಕೊಳ್ಳಲಾಗಿರುತ್ತದೆ.

- ಮೊದಲನೇ ಹಂತದ ಏತ ಮತ್ತು ವಿದ್ಯುತ್ ಪೂರೈಸುವ ಕಾಮಗಾರಿಗಳನ್ನು 7 ಪ್ಯಾಕೇಜ್‌ಗಳಾನ್ನಾಗಿ ವಿಂಗಡಿಸಿ ಟೆಂಡರ್ ಮೂಲಕ ಕೈಗೆತ್ತಿಕೊಂಡಿದ್ದು, ಪ್ರಸ್ತುತ ಸದರಿ ಕಾಮಗಾರಿಗಳು ಬಹುತೇಕ ಪೂರ್ಣಗೊಳ್ಳುವ ಹಂತದಲ್ಲಿರುತ್ತವೆ.
- ಎರಡನೇ ಹಂತದ ಗುರುತ್ವ ನಾಲೆ ಹಾಗೂ ಫೀಡರ್ ಕಾಮಗಾರಿಗಳನ್ನು 35 ಪ್ಯಾಕೇಜುಗಳನ್ನಾಗಿ ವಿಂಗಡಿಸಿ ಟೆಂಡರ್ ಮೂಲಕ ಕೈಗೆತ್ತಿಕೊಂಡಿದ್ದು, ಪ್ರಸ್ತುತ ಸದರಿ ಕಾಮಗಾರಿಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ.
- ಭೈರಗೊಂಡ್ಲು ಜಲಾಶಯದ ನಂತರದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಇ)	ಎತ್ತಿನಹೊಳೆ ಯೋಜನೆಯಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಇದುವರೆವಿಗೂ ನೀಡಿರುವ ಅನುದಾನ ಮೊತ್ತವೆಷ್ಟು (ಸಂಪೂರ್ಣವಾದ ಮಾಹಿತಿ ನೀಡುವುದು)	• ಅನುದಾನವನ್ನು ಜಿಲ್ಲಾವಾರು ನಿಗಧಿಪಡಿಸಿರುವುದಿಲ್ಲ. ಈ ಯೋಜನೆಯಲ್ಲಿ ಬರುವ 7 ಜಿಲ್ಲೆಗಳಲ್ಲಿನ ಕಾಮಗಾರಿಗಳ ಅಂದಾಜು ಪ್ರಕಾರ ಕಾರ್ಯವನ್ನು ನಿರ್ವಹಿಸುತ್ತಿದ್ದು ಅವುಗಳ ವೆಚ್ಚಗಳಿಗೆ ಅನುಗುಣವಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. • ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಪ್ರಾರಂಭದಿಂದ ಭೈರಗೊಂಡ್ಲು ಜಲಾಶಯದವರೆಗಿನ ಎಲ್ಲಾ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಅದರಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕಿಗೆ ಸಂಬಂಧಿಸಿದಂತೆ ರೂ.863.49 ಕೋಟಿಗಳ ಮೊತ್ತದ ಗೌರಿಬಿದನೂರು ಪೂರಕ ನಾಲೆಯ ಕಾಮಗಾರಿಯು ಪ್ರಗತಿಯಲ್ಲಿದ್ದು ಆಗಸ್ಟ್–2021ರ ವರಗೆ ರೂ.356.45ಕೋಟಿ ವೆಚ್ಚವಾಗಿರುತ್ತದೆ.
ಈ)	ಈ ಅನುದಾನದಲ್ಲಿ ಈ ಎರಡು ಜಿಲ್ಲೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ತಾಲ್ಲೂಕುವಾರು ಸಂಪೂರ್ಣವಾದ ಮಾಹಿತಿ ನೀಡುವುದು)	• ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರು ಹಾಗೂ ಕೆರೆ ತುಂಬಿಸುವ ಫೀಡರ್ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಸರ್ವೆಕಾರ್ಯ ಪೂರ್ಣಗೊಂಡಿದ್ದು, ಅಂದಾಜು ಪಟ್ಟಿಗಳನ್ನು ಸಿದ್ಧಪಡಿಸಲಾಗುತ್ತಿದೆ. • ಈ ಜಿಲ್ಲೆಗಳಿಗೆ ಸಂಬಂಧಿಸಿದ ಕಾಮಗಾರಿಗಳು ಈ ಯೋಜನೆಯ ಅಂತಿಮ ಭಾಗದಲ್ಲಿರುವುದರಿಂದ, ಪ್ರಸಕ್ತ ಸಾಲಿನಲ್ಲಿ ಅಂದಾಜುಗಳಿಗೆ ತೀರುವಳಿ ಪಡೆದು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ನಿಯಮಾನುಸಾರ ಅಗತ್ಯ ಕ್ರಮ ಜರುಗಿಸಲಾಗುತ್ತಿದೆ.
ಉ)	ಈ ಅನುದಾನವನ್ನು ಹಂಚಿಕೆ ಮಾಡುವಾಗ ತಾರತಮ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಯೋಜನೆಗೆ ಆಯವ್ಯಯದಲ್ಲಿ ಒದಗಿಸುವ ಅನುದಾನವನ್ನು ಆದ್ಯತೆಯ ಅನುಸಾರ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗುತ್ತಿದೆ.
ಊ)	ಈ ಯೋಜನೆಯ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ಸಂಪೂರ್ಣವಾದ ಮಾಹಿತಿ ನೀಡುವುದು)	ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಈ ಕೆಳಕಂಡ ಕಾಮಗಾರಿಗಳನ್ನು ಅನುದಾನದ ಲಭ್ಯತೆಯ ಮೇರೆಗೆ 2023ರ ಅಂತ್ಯಕ್ಕೆ ಪೂರ್ಣಗೊಳಿಸಲು ಯೋಜಿಸಲಾಗಿದೆ. • ಮೊದಲನೆ ಹಂತದ ಏತ ಮತ್ತು ವಿದ್ಯುತ್ ಕಾಮಗಾರಿಗಳು. • ಎರಡನೆ ಹಂತದ ಗುರುತ್ವ ಕಾಲುವೆ ಕಾಮಗಾರಿಗಳು. • ಭೈರಗೊಂಡ್ಲು ಜಲಾಶಯಕ್ಕಿಂತ ಮುಂಚೆ ಕವಲೊಡೆಯುವ ವಿವಿಧ ಫೀಡರ್ ಕಾಲುವೆ ಕಾಮಗಾರಿಗಳು. ಭೈರಗೊಂಡ್ಲು ಜಲಾಶಯ ನಿರ್ಮಾಣ ಕಾಮಗಾರಿ, ಭೈರಗೊಂಡ್ಲು ಜಲಾಶಯದಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರೊದಗಿಸುವ ಲಿಫ್ಟ್ ಕಾಮಗಾರಿ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಫೀಡರ್ ಕಾಲುವೆ ಕಾಮಗಾರಿಗಳನ್ನು ಸದರಿ ಜಲಾಶಯ ನಿರ್ಮಾಣದಲ್ಲಿ ಉದ್ಭವಿಸಿರುವ ಭೂಸ್ವಾಧೀನ ಸಮಸ್ಯೆ ಇತ್ಯರ್ಥಪಡಿಸಿ ನಂತರ ಕೈಗೊಳ್ಳಲು ಯೋಜಿಸಲಾಗಿದೆ.

ಸಂಖ್ಯೆ: ಜಸಂಇ 68 ಡಬ್ಲ್ಯೂಎಲ್ಎ 2021

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು